ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ರಾಜ್ಯದಲ್ಲಿ ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಹಣಕಾಸು ಯೋಜನೆಯ ಅಭಿವೃದ್ಧಿ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):_

195(267) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕರ್ನಾಟಕ ನಗರ ಮೂಲ ಸೌಕರ್ಯ ಮತ್ತು ಅಭಿವೃದ್ಧಿ ಹಣಕಾಸು ಸಂಸ್ಥೆ(ಕೆ.ಯು.ಐ.ಡಿ.ಎಫ್.ಸಿ)ಯಲ್ಲಿ ಚಾಲ್ತಿಯಲ್ಲಿರುವ ಹಾಗೂ ಪ್ರಾರಂಭಿಕ ಹಂತದಲ್ಲಿರುವ ಯೋಜನೆಗಳಿಂದ ಕೈಗೆತ್ತಿಗೊಂಡಿರುವ ಕಾಮಗಾರಿಗಳು ಯಾವುವು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಜಿಲ್ಲೆಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿದೆ; ಎಷ್ಟು ಕಾಮಗಾರಿಗಳು ಬಾಕಿ ಇವೆ; ಕಾಮಗಾರಿಗಳಿಗೆ ತಗುಲಿದ ವೆಚ್ಚವೆಷ್ಟು; (ಜಿಲ್ಲಾವಾರು ಗುತ್ತಿಗೆದಾರರ ವಿವರವಾದ ಮಾಹಿತಿ ನೀಡುವುದು)

(ಇ) ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿ ಸರ್ಕಾರದಿಂದ ಹಮ್ಮಿಕೊಂಡಿರುವ ಯೋಜನೆಗಳಾವುವು ಮತ್ತು ಅನುದಾನದ ಮೊತ್ತವೆಷ್ಟು; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

(ಈ) ಕೆ.ಯು.ಐ.ಡಿ.ಎಫ್.ಸಿ.ಯ ವತಿಯಿಂದ ಕರ್ನಾಟಕ ರಾಜ್ಯದ ಆಯ್ದ ಪಟ್ಟಣಗಳಲ್ಲಿ ಪಾರಂಪರಿಕ ಆಧಾರಿತ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆಯೇ; ಹಾಗಿದ್ದಲ್ಲಿ; ಯಾವ ಯಾವ ಪಟ್ಟಣಗಳನ್ನ ಆಯ್ಕೆ ಮಾಡಲಾಗಿದೆ; ಇದಕ್ಕಿರುವ ಮಾನದಂಡಗಳೇನು?(ವಿವರ ನೀಡುವುದು)